ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯವಿಚಾರಣೆಃ 1, 3 ಹಾಗೂ 4 ನೇ ಪ್ರತಿವಾದಿಯರ ಪರವಾಗಿ ಶ್ರೀ ಎನ್.ಹೆಚ್.ಆರ್ ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ದಾವೆಗೆ ಪೂರಕವಾಗಿ ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದು, ಅವುಗಳಲ್ಲಿರುವ ನಮೂನೆ ಸಂಖ್ಯೆ 12 ನ್ನು ನಿಡಿ-1 ಎಂದು, ನಮೂನೆ ಸಂಖ್ಯೆ 9 ನ್ನು ನಿಡಿ-2 ಎಂದು, ದಿನಾಂಕ 28-12-2021 ರ ಪಂಚನಾಮೆ ಪತ್ರವನ್ನು ನಿಡಿ-3 ಎಂದು ಮತ್ತು ಎರಡು ಭಾವಚಿತ್ರಗಳನ್ನು ನಿಡಿ-4 ಮತ್ತು 5 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಹಾಗೂ ನಾನು ಹಾಜರುಪಡಿಸಿದ ದಾಖಲೆಗಳನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ವಜಾ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ..

**ಪಾಟೀ ಸವಾಲು ವಾದಿ ಪರವಾಗಿ ವಕೀಲರು ಸಮಯ ಕೋರಿದ್ದರಿಂದ ಸಮಯ ನೀಡಲಾಯಿತು.**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು,**
**ಚಿಂಚೋಳಿ**